# ಶ್ರೀಪಾದರಾಜ ವಿರಚಿತ "ಮಧ್ವನಾಮ"

ಜಯ ಜಯ ಜಗತ್ರಾಣ ಜಗದೊಳಗೆ ಸುತ್ರಾಣ
ಅಖಿಳ ಗುಣ ಸದ್ಧಾಮ ಮಧ್ವನಾಮ ।ಪ।

ಅವ ಕಚ್ಛಪ ರೂಪದಿಂದಲಂಡೋದಕವ
ಓವಿ ಧರಿಸಿದ ಶೇಷಮೂರುತಿಯನು
ಆವವನ ಬಳಿವಿಡಿದು ಹರಿಯ ಸುರರೆಯ್ದುವರು
ಆ ವಾಯು ನಮ್ಮ ಕುಲಗುರುರಾಯನು ।೧।

ಆವವನು ದೇಹದೊಳಗಿರಲು ಹರಿ ನೆಲಸಿಹನು
ಆವವನು ತೊಲಗೆ ಹರಿ ತಾ ತೊಲಗುವ
ಆವವನು ದೇಹದ ಒಳ ಹೊರಗೆ ನಿಯಾಮಕನು
ಆ ವಾಯು ನಮ್ಮ ಕುಲಗುರುರಾಯನು ।೨।

ಕರಣಾಭಿಮಾನಿ ಸುರರು ದೇಹವ ಬಿಡಲು
ಕುರುಡ ಕಿವುಡ ಮೂಕನೆಂದೆನಿಸುವ
ಪರಮ ಮುಖ್ಯಪ್ರಾಣ ತೊಲಗಲಾ ದೇಹವನು
ಅರಿತು ಪೆಣವೆಂದು ಪೇಳುವರು ಬುಧಜನ ।೩।

ಸುರರೊಳಗೆ ನರರೊಳಗೆ ಸರ್ವಭೂತಗಳೊಳಗೆ
ಪರತರನೆನಿಸಿ ನಿಯಾಮಿಸಿ ನೆಲಸಿಹ
ಹರಿಯನಲ್ಲದೆ ಬಗೆಯ ಅನ್ಯರನು ಲೋಕದೊಳು
ಗುರುಕುಲತಿಲಕ ಮುಖ್ಯ ಪವಮಾನನು ।೪।

ತ್ರೇತೆಯಲಿ ರಘುಪತಿಯ ಸೇವೆ ಮಾಡುವೆನೆಂದು
ವಾತಸುತ ಹನುಮಂತನೆಂದೆನಿಸುವ
ಪೋತ ಭಾವದಿ ತರಣಿ ಬಿಂಬಕ್ಕೆ ಲಂಘಿಸಿದ
ಈತಗೆಣೆಯಾರು ಮೂರ್ಲೋಕದೊಳಗೆ ।೫।

ತರಣಿಗಭಿಮುಖವಾಗಿ ಶಬ್ಧಶಾಸ್ತ್ರವ ರಚಿಸಿ
ಉರವಣಿಸಿ ಹಿಂದುಮುಂದಾಗಿ ನಡೆದ
ಪರಮ ಪವಮಾನ ಸುತ ಉದಯಾಸ್ತ ಶೈಲಗಳ
ಭರದಿಯ್ಯೈದಿದಗೀತಗುಪಮೆ ಉಂಟೇ ।೬।

ಅಖಿಳ ವೇದಗಳ ಸಾರ ಪಠಿಸಿದನು ಮುನ್ನಲ್ಲಿ
ನಿಖಿಳ ವ್ಯಾಕರಣಗಳ ಇವ ಪಠಿಸಿದ
ಮುಖದಲ್ಲಿ ಕಿಂಚಿದಪಶಬ್ದ ಇವಗಿಲ್ಲವೆಂದು
ಮುಖ್ಯಪ್ರಾಣನನು ರಾಮನನುಕರಿಸಿದ ।೭।

ತರಣಿಸುತನನು ಕಾಯ್ದು ಶರಧಿಯನು ನೆರೆಧಾಟಿ
ಧರಣಿಸುತೆಯಳ ಕಂಡು ಧನುಜರೊಡನೆ
ಭರದಿ ರಣವನೆ ಮಾಡಿ ಗೆಲಿದು ದಿವ್ಯಾಸ್ತ್ರಗಳ
ಉರುಹಿ ಲಂಕೆಯ ಬಂದ ಹನುಮಂತನು ।೮।

ಹರಿಗೆ ಚೂಡಾಮಣಿಯನ್ನಿತ್ತು ಹರಿಗಳ ಕೂಡಿ
ಶರಧಿಯನು ಕಟ್ಟಿ ಬಲು ರಕ್ಕಸರನು
ಒರಸಿ ರಣದಲಿ ದಶಶಿರನ ಹುಡಿಗುಟ್ಟಿದ
ಮೆರೆದ ಹನುಮಂತ ಬಲವಂತ ಧೀರ ।೯।

ಉರಗ ಬಂಧಕೆ ಸಿಲುಕಿ ಕಪಿವರರು ಮೈಮರೆಯೆ
ತರಣಿಕುಲತಿಲಕನಾಜ್ಞೆಯ ತಾಳಿದ
ಗಿರಿಸಹಿತ ಸಂಜೀವನವ ಕಿತ್ತು ತಂದಿತ್ತ
ಹರಿವರಗೆ ಸರಿಯುಂಟೆ ಹನುಮಂತಗೆ ।೧೦।

ವಿಜಯ ರಘುಪತಿ ಮೆಚ್ಚಿ ಧರಣಿಸುತೆಯಳಿಗೀಯೆ
ಭಜಿಸಿ ಮೌಕ್ತಿಕದ ಹಾರವನು ಪಡೆದ
ಅಜಪದವಿಯನು ರಾಮ ಕೊಡುವೆನೆನೆ ಹನುಮಂತ
ನಿಜ ಭಕುತಿಯನೆ ಬೇಡಿ ವರವ ಪಡೆದ ।೧೧।

ಆ ಮಾರುತನೆ ಭೀಮನೆನೆಸಿ ದ್ವಾಪರದಲಿ
ಸೋಮಕುಲದಲಿ ಜನಿಸಿ ಪಾರ್ಥನೊಡನೆ
ಭೀಮ ವಿಕ್ರಮ ರಕ್ಕಸರ ಮುರಿದೊಟ್ಟಿದ
ಆ ಮಹಿಮ ನಮ್ಮ ಕುಲಗುರುರಾಯನು ।೧೨।

ಕರದಿಂದ ಶಿಶುಭಾವನಾದ ಭೀಮನು ಬಿಡಲು
ಗಿರಿವಡೆದು ಶತಶೃಂಗವೆಂದೆನಿಸಿತು
ಹರಿಗಳ ಹರಿಗಳಿಂ ಕರಿಗಳ ಕರಿಗಳಿಂ
ಅರೆವ ವೀರನಿಗೆ ಸುರ ನರರು ಸರಿಯೇ ।೧೩।

ಕುರುಪ ಗರಳವನಿಕ್ಕೆ ನೆರೆ ಉಂಡು ತೇಗಿ
ಹಸಿದುರಗಗಳಮ್ಯಾಲೆ ರಗಲದನೊರಸಿದ
ಅರಗಿನರಮನೆಯಲ್ಲಿ ಉರಿಯನಿಕ್ಕಲು ವೀರ
ಧರಿಸಿ ಜಾಹ್ನವಿಗೊಯ್ದು ತನ್ನನುಜರ ।೧೪।

ಅಲ್ಲಿರ್ದ ಬಕ ಹಿಡಿಂಬಕರೆಂಬ ರಕ್ಕಸರ
ನಿಲ್ಲದೊರಕಿಸಿದ ಲೋಕಕಂಟಕರನು
ಬಲ್ಲಿದಸುರರ ಗೆಲಿದು ದ್ರೌಪದಿಯ ಕೈವಿಡಿದು
ಎಲ್ಲ ಸುಜನರಿಗೆ ಹರುಷವ ತೋರಿದ ।೧೫।

ರಾಜಕುಲ ವಜ್ರನೆನೆಸಿದ ಮಾಗಧನ ಸೀಳಿ
ರಾಜಸೂಯ ಯಾಗವನು ಮಾಡಿಸಿದನು
ಅಜಿಯೊಳು ಕೌರವರ ಬಲವ ಸವರುವೆನೆಂದು
ಮೂಜಗವರಿಯೆ ಕಂಕಣ ಕಟ್ಟಿದ ।೧೬।

ಮಾನನಿಧಿ ದ್ರೌಪದಿಯ ಮನದಿಂಗಿತವನರಿತು
ದಾನವರ ಸವರಬೇಕೆಂದು ಬ್ಯಾಗ
ಕಾನನವ ಪೊಕ್ಕು ಕಿಮ್ಮೀರಾದಿಗಳ ತರಿದು
ಮಾನಿನಿಗೆ ಸೌಗಂಧಿಕವನೆ ತಂದ ।೧೭।

ದುರುಳ ಕೀಚಕನು ತಾಂ ದ್ರೌಪದಿಯ ಚೆಲುವಿಕೆಗೆ
ಮರುಳಾಗಿ ಕರೆಕರೆಯ ಮಾಡಲವನಾ
ಗರಡಿ ಮನೆಯಲ್ಲಿ ವರೆಸಿ ಅವನನ್ವಯವ
ಕುರುಪನಟ್ಟಿದ ಮಲ್ಲಕುಲವ ಸದೆದ ।೧೮।

ಕೌರವರ ಬಲ ಸವರಿ ವೈರಿಗಳ ನೆಗ್ಗೊತ್ತಿ
ಓರಂತೆ ಕೌರವರ ಮುರಿದು ಮೆರೆದ
ವೈರಿ ದುಶ್ಯಾಸನನ ರಣದಲಿ ಎಡೆಗೆಡಹಿ
ವೀರ ನರಹರಿಯ ಲೀಲೆಯ ತೋರಿದ ।೧೯।

ಗುರುಸುತನು ಸಂಗರದಿ ನಾರಾಯಣಾಸ್ತ್ರವನು
ಉರವಣಿಸಿ ಬಿಡಲು ಶಸ್ತ್ರವ ಬಿಸುಟರು
ಹರಿಕೃಪೆಯ ಪಡೆದಿರ್ದ ಭೀಮ ಹುಂಕಾರದಲಿ
ಹರಿಯ ದಿವ್ಯಾಸ್ತ್ರವನು ನೆರೆ ಅಟ್ಟಿದ ।೨೦।

ಚಂಡ ವಿಕ್ರಮನು ಗದೆಗೊಂಡು ರಣದಿ ಭೂ
ಮಂಡಲದೊಳಿದಿರಾಂತ ಖಳರನ್ನೆಲ್ಲಾ
ಹಿಂಡಿ ಬಿಸುಟಿಹ ವೃಕೋದರನ ಪ್ರತಾಪವನು
ಕಂಡು ನಿಲ್ಲುವರಾರು ತ್ರಿಭುವನದೊಳು ।೨೧।

ದಾನವರು ಕಲಿಯುಗದೊಳವತರಿಸಿ ವಿಬುಧರೊಳು
ವೇನನ ಮತವನರುಹಲದನರಿತು
ಜ್ಞಾನಿ ತಾ ಪವಮಾನ ಭೂತಳದೊಳವತರಿಸಿ
ಮಾನನಿಧಿ ಮಧ್ವಾಖ್ಯನೆಂದೆನಿಸಿದ ।೨೨।

ಆರ್ಭಕತನದೊಳ್ಕೆದಿ ಬದರಿಯಲಿ ಮಧ್ವಮುನಿ
ನಿರ್ಭಯದಿ ಸಕಲ ಶಾಸ್ತ್ರವ ಪಠಿಸಿದ
ಉರ್ವಿಯೊಳು ಮಾಯೆ ಬೀರಲು ತತ್ತ್ವಮಾರ್ಗವನು
ಓರ್ವ ಮಧ್ವಮುನಿ ತೋರ್ದ ಸುಜನರ್ಗೆ ।೨೩।

ಸರ್ವೇಶ ಹರಿ ವಿಶ್ವ ಎಲ್ಲ ತಾ ಪುಸಿಯೆಂಬ
ದುರ್ವಾದಿಗಳ ಮತವ ನೆರೆ ಖಂಡಿಸಿ
ಸರ್ವೇಶ ಹರಿ ವಿಶ್ವ ಸತ್ಯವೆಂದುರುಹಿದಾ
ಶರ್ವಾದಿ ಗೀರ್ವಾಣ ಸಂತತಿಯಲಿ ।೨೪।

ಬದರೀಕಾಶ್ರಮಕೆ ಪುನರಪಿಯೈದಿ ವ್ಯಾಸಮುನಿ
ಪದಕೆರಗಿ ಅಖಿಳ ವೇದಾರ್ಥಗಳನು
ಪದುಮನಾಭನ ಮುಖದಿ ತಿಳಿದು ಬ್ರಹ್ಮತ್ವ
ಯೈದಿದ ಮಧ್ವಮುನಿರಾಯಭಿವಂದಿಪೆನು ।೨೫।

ಜಯಜಯತು ದುರ್ವಾದಿಮತತಿಮಿರ ಮಾರ್ತಾಂಡ
ಜಯಜಯತು ವಾದಿಗಜ ಪಂಚಾನನ
ಜಯಜಯತು ಚಾರ್ವಾಕಗರ್ವಪರ್ವತ ಕುಲಿಶ
ಜಯ ಜಯ ಜಗನ್ನಾಥ ಮಧ್ವನಾಥ ।೨೬।

ತುಂಗಕುಲ ಗುರುವರನ ಹೃತ್ಕಮಲದಲಿ ನಿಲಿಸಿ
ಭಂಗವಿಲ್ಲದೆ ಸುಖವ ಸುಜನಕೆಲ್ಲ
ಹಿಂಗದೆ ಕೊಡುವ ನಮ್ಮ ಮಧ್ವಾಂತರಾತ್ಮಕ
ರಂಗವಿಠಲನೆಂದು ನೆರೆ ಸಾರಿರೈ ।೨೭ ।

## ಜಗನ್ನಾಥದಾಸರ ಫಲಶ್ರುತಿ

ಸೋಮ ಸೂರ್ಯೋಪರಾಗದಿ ಗೋಸಹಸ್ರಗಳು
ಭೂಮಿದೇವರಿಗೆ ಸುರನದಿಯ ತೀರದಿ
ಶ್ರೀಮುಕುಂದಾರ್ಪಣವೆನುತ ಕೊಟ್ಟ ಫಲಮಕ್ಕು
ಈ ಮಧ್ವನಾಮ ಬರೆದೋದಿದರ್ಗೆ । ೧ ।

ಪುತ್ರರಿಲ್ಲದವರು ಸತ್ಪುತ್ರರೈದುವರು
ಸರ್ವತ್ರದಲಿ ದಿಗ್ವಿಜಯವಹುದು ಸಕಲ
ಶತ್ರುಗಳು ಕೆಡುವರಪಮೃತ್ಯು ಬರಲಂಜುವುದು
ಸೂತ್ರನಾಮಕನ ಸಂಸ್ತುತಿ ಮಾತ್ರದಿ । ೨ ।

ಶ್ರೀಪಾದರಾಯ ಪೇಳಿದ ಮಧ್ವನಾಮ
ಸಂತಾಪಕಳೆದಖಿಳ ಸೌಖ್ಯವನೀವುದು
ಶ್ರೀಪತಿ ಜಗನ್ನಾಥವಿಠಲನ ತೋರಿ ಭವ
ಕೂಪಾರದಿಂದ ಕಡೆ ಹಾಯಿಸುವುದು ।೩।

ಸಂಗ್ರಹ – ನರಹರಿಸುಮಧ್ವ

**For www.sumadhwaseva.com**

**Email id : naraharisumadhwa@yahoo.in**

**Phone : 9916904341**